ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/03/ಇಸಿಎಸ್(2)/2022

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದಿನಾಂಕ:06/12/2022
ದೂರವಾಣಿ ಸಂಖ್ಯೆ: 080-22266985

**ಸುತ್ತೋಲೆ**

ವಿಷಯ: 2023 ರ ಜನವರಿ/ಫೆಬ್ರವರಿ ಸೆಮಿಸ್ಟರ್ ಪರೀಕ್ಷೆಯ CANDIDATE LIST UPDATE ಮಾಡುವಾಗ ಅನುಸರಿಸಬೇಕಾದ ಕ್ರಮಗಳ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಡಿ 57 ಟಿಪಿಇ 2013 ಬೆಂಗಳೂರು ದಿನಾಂಕ: 17/04/2015

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2023 ರ ಜನವರಿ/ಫೆಬ್ರುವರಿ ಡಿಪ್ಲೊಮಾ ಸೆಮಿಸ್ಟರ್ ಪರೀಕ್ಷೆಗೆ ಸಂಬಂಧಪಟ್ಟ ಅರ್ಹ ಅಭ್ಯರ್ಥಿಗಳ CANDIDATE LIST UPDATE ಮಾಡುವಾಗ ವಿದ್ಯಾರ್ಥಿಗಳ ಮಾಹಿತಿಯನ್ನು ಸಮರ್ಪಕವಾಗಿ, ಕ್ರಮಬದ್ಧವಾಗಿ, ತಪ್ಪಿಲ್ಲದೆ ಜಾಗರೂಕತೆಯಿಂದ ಅಪ್ಡೇಟ್ ಮಾಡಲು ಸೂಚಿಸಲಾಗಿದೆ.

1. ವಿದ್ಯಾರ್ಥಿಯ ಹೆಸರು-ಎಸ್ ಎಸ್ ಎಲ್ ಸಿ ಅಂಕಪಟ್ಟಿಯಲ್ಲಿ ನಮೂದಿಸಿರುವಂತೆ.
2. ವಿದ್ಯಾರ್ಥಿಯ ತಂದೆಯ ಹೆಸರು- ಎಸ್ ಎಸ್ ಎಲ್ ಸಿ ಅಂಕಪಟ್ಟಿಯಲ್ಲಿ ನಮೂದಿಸಿರುವಂತೆ.
3. ವಿದ್ಯಾರ್ಥಿಯ ತಾಯಿಯ ಹೆಸರು- ಎಸ್ ಎಸ್ ಎಲ್ ಸಿ ಅಂಕಪಟ್ಟಿಯಲ್ಲಿ ನಮೂದಿಸಿರುವಂತೆ.
4. EXAM FEES NOT PAID ಮಾಹಿತಿ.
5. ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳ (C-09, C-15 & C-20) ಬಾಕಿ ಇರುವ ವಿಷಯಗಳ (PART EXAM & FULL EXAM) ಮಾಹಿತಿ - ಶುಲ್ಕ ಪಾವತಿ ಆಧಾರದಲ್ಲಿ
6. PUC/ITI LATERAL ENTRY ಮುಖಾಂತರ ಪ್ರವೇಶ ಪಡೆದ ವಿದ್ಯಾರ್ಥಿಗಳ BRIDGE ವಿಷಯಗಳ ಮಾಹಿತಿ.
7. ಹಿಂದಿನ ಪರೀಕ್ಷೆಗಳಲ್ಲಿ ವಿದ್ಯಾರ್ಥಿ MAL PRACTICE ಪ್ರಕರಣಗಳಲ್ಲಿ ಭಾಗಿಯಾಗಿ ಶಿಕ್ಷೆಗೆ ಒಳಗಾದ ವಿದ್ಯಾರ್ಥಿಗಳ ಶಿಕ್ಷೆಯ ಸ್ವರೂಪದ ಮಾಹಿತಿ.

ಮೇಲೆ ತಿಳಿಸಿದ ಎಲ್ಲಾ ಮಾಹಿತಿಯನ್ನು ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಸಮರ್ಪಕವಾಗಿ ಅಪ್ಡೇಟ್ ಮಾಡಿದಲ್ಲಿ ಮಾತ್ರ ಮಂಡಳಿಯಿಂದ ವಿದ್ಯಾರ್ಥಿಗಳ ಫಲಿತಾಂಶ, ಅಂಕಪಟ್ಟಿಗಳು ಮತ್ತು ಡಿಪ್ಲೊಮಾ ಪ್ರಮಾಣ ಪತ್ರವನ್ನು ತಪ್ಪಿಲ್ಲದೆ ನೀಡಲು ಸಾಧ್ಯ ಎಂದು ತಿಳಿಸಲಾಗಿದೆ.

ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರು/ವಿಭಾಗಾಧಿಕಾರಿಗಳು/ಪರೀಕ್ಷಾ ಸಿಬ್ಬಂದಿಯವರು ದಕ್ಷತೆಯಿಂದ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿದರೆ ವಿದ್ಯಾರ್ಥಿಗಳಿಗೆ ಆಗುವ ಅನಾನುಕೂಲಗಳನ್ನು ಹಾಗೂ ತಾಂತ್ರಿಕ ಪರೀಕ್ಷಾ ಮಂಡಳಿ ಮತ್ತು ಸಂಸ್ಥೆಗಳಲ್ಲಿನ ಅನಗತ್ಯ ಕಾರ್ಯ ಒತ್ತಡವನ್ನು ತಪ್ಪಿಸಬಹುದಾಗಿದೆ.

ವಿದ್ಯಾರ್ಥಿಗಳ ಮಾಹಿತಿಯನ್ನು ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಸರಿಯಾಗಿ ಅಪ್ಡೇಟ್ ಮಾಡದ ಸಂಸ್ಥೆಯ ಪ್ರಾಚಾರ್ಯರುಗಳ ಮೇಲೆ ಉಲ್ಲೇಖಿತ ಸರ್ಕಾರದ ಆದೇಶದನ್ವಯ ಸೂಕ್ತ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಲಾಗಿದೆ.

ಕಾರ್ಯದರ್ಶಿ 13/12/22
ತಾಂತ್ರಿಕ ಪರೀಕ್ಷಾ ಮಂಡಳಿ
ಬೆಂಗಳೂರು

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಪ್ರಾಚಾರ್ಯರುಗಳಿಗೆ-ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ

ಪ್ರತಿ: 1. ಸಂಸ್ಥೆಗಳಲ್ಲಿನ ವಿಭಾಗಾಧಿಕಾರಿಗಳು/ಪರೀಕ್ಷಾ ವಿಭಾಗದ ಕಾರ್ಯ ನಿರ್ವಾಹಕರು- ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ

2. ಇ ಆಡಳಿತ-ವೆಬ್ ಸೈಟ್ ನಲ್ಲಿ ಪ್ರಕಟಿಸಲು

3. ಗಣಕ ಕೇಂದ್ರ-ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು